ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/09/ಪಿ.ಯು ಪರೀಕ್ಷೆ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560001
ದಿನಾಂಕ : 06.08.2022

## ಸುತ್ತೋಲೆ

ವಿಷಯ : 2022ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗಳನ್ನು ಸುವ್ಯವಸ್ಥಿತವಾಗಿ ನಡೆಸಲು ಸಹಕಾರ ನೀಡುವ ಬಗ್ಗೆ.

ಉಲ್ಲೇಖ : ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು ಇವರ ಪತ್ರ ಸಂಖ್ಯೆ: ಪಪೂಶಿಇ/ಪರೀಕ್ಷೆ/ದ್ವಿಪಿಪ/4/2021-22, ದಿನಾಂಕ : 30.07.2022.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಕೋರಿರುವಂತೆ, ದಿನಾಂಕ : 12.08.2022 ರಿಂದ 25.08.2022 ರವರೆಗೆ ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆಗಳು ನಡೆಯಲಿದ್ದು, ಸದರಿ ಪರೀಕ್ಷೆಗಳಿಗೆ ಪದವಿ ತರಗತಿಗಳು ಬೋಧಿಸಲಾಗುತ್ತಿರುವ ಸರ್ಕಾರಿ/ ಖಾಸಗಿ ಅನುದಾನಿತ ಪದವಿ ಕಾಲೇಜುಗಳನ್ನೂ ಸಹ ಪರೀಕ್ಷಾ ಕೇಂದ್ರಗಳನ್ನಾಗಿ ಬಳಸಿಕೊಳ್ಳುತ್ತಿರುವ ಹಿನ್ನೆಲೆಯಲ್ಲಿ ಸದರಿ ಕಾಲೇಜುಗಳಲ್ಲಿ ಅವಶ್ಯಕ ಕಟ್ಟಡ/ಕೊಠಡಿಗಳನ್ನು ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ನೀಡುವಂತೆ ಆದೇಶ ನೀಡಿ ಇಲಾಖೆಗೆ ಸಹಕರಿಸುವಂತೆ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಇಲಾಖಾ ವ್ಯಾಪ್ತಿಯ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗಳು ನಡೆಯಲ್ಲಿರುವ ದಿನಾಂಕಗಳಂದು ಕಾಲೇಜುಗಳಲ್ಲಿರುವ ಅವಶ್ಯಕ ಕಟ್ಟಡ/ ಕೊಠಡಿಗಳನ್ನು ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ನೀಡಿ ಸಹಕರಿಸುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

<u>ಇವರಿಗೆ:</u>

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗ.
2. ಎಲ್ಲಾ ಸರ್ಕಾರಿ/ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ –ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.

<u>ಪ್ರತಿಯನ್ನು:</u>

1. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು -560012 (ಮಾಹಿತಿಗಾಗಿ)
2. ಮಾನ್ಯ ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಹಾಗೂ ಜಂಟಿ ನಿರ್ದೇಶಕರ ಆಪ್ತಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು.
3. ಕಛೇರಿ ಪ್ರತಿ.